# ಕನ್ನಡ

ಹೆಸರು : ಲಾಸ್ಯ. ಆರ್

ವರ್ಗ : ೧ನೇ ಬಿ .ಕಾಂ
ಬಿ ವಿಭಾಗ

ಕ್ರಮ ಸಂಖ್ಯೆ : 21DJEC1103





# ವಿಷಯಗಳು

- ಕನ್ನಡ - ನಾಡು ನುಡಿ
- ಕನ್ನಡ ಭಾಷೆ
- ಕನ್ನಡ ಸಂಸ್ಕೃತಿ
- ಕನ್ನಡ ಸಾಹಿತ್ಯ
- ಕವಿಗಳು
- ಸಾಧಕರು

# ಕನ್ನಡ - ನಾಡು ನುಡಿ

ನವೆಂಬರ್ 1, ಕನ್ನಡಿಗರಿಗೆಲ್ಲ ಸಂಭ್ರಮ ಮತ್ತು ಸಡಗರದ ದಿನ. ಹಾಗೆಯೇ ಕನ್ನಡ ನಾಡು-ನುಡಿಯ ಅಭಿವೃದ್ಧಿಯ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸುವ ದಿನವೂ ಆಗಿದೆ. ಸರಿಸುಮಾರು ಎರಡೂವರೆ ಸಾವಿರ ವರ್ಷಗಳ ಸಾಂಸ್ಕೃತಿಕ ಇತಿಹಾಸವನ್ನು ಹೊಂದಿದ ಈ ಕನ್ನಡ ನಾಡನ್ನು ಶಾತವಾಹನ, ಗಂಗ, ಕದಂಬ, ಚಾಲುಕ್ಯ, ರಾಷ್ಟ್ರಕೂಟ ಹೊಯ್ಸಳ ಮುಂತಾದ ರಾಜವಂಶದವರು ಆಳುವುದಲ್ಲದೆ ರಾಷ್ಟ್ರದ ಇತಿಹಾಸದಲ್ಲಿ ತಮ್ಮ ಕೀರ್ತಿಗಾಥೆಯನ್ನು ಸುವರ್ಣಾಕ್ಷರಗಳಿಂದ ದಾಖಲಿಸಿದ್ದಾರೆ. ಬೇಲೂರು-ಹಳೆಬೀಡು, ಬದಾಮಿ-ಪಟ್ಟದಕಲ್ಲು, ಐಹೊಳೆ ಹಂಪಿ ಮುಂತಾದ ಸ್ಥಳಗಳು ನಮ್ಮ ಭವ್ಯ ಇತಿಹಾಸ ಮತ್ತು ಪರಂಪರೆಗೆ ಸಾಕ್ಷಿಯಾಗಿವೆ. ಪ್ರಾಚೀನ ಕಾಲದಿಂದಲೂ ನಮ್ಮ ನಾಡು ಧರ್ಮ, ಸಾಹಿತ್ಯ, ಸಂಗೀತ, ನೃತ್ಯ, ಕಲೆ, ಕ್ರೀಡೆ, ಶಿಲ್ಪ ಮತ್ತು ವಾಸ್ತು ಶಿಲ್ಪಗಳಿಗೆ ಹೆಸರಾದುದು. ಶೈವ, ವೈಷ್ಣವ, ಜೈನ, ಬೌದ್ಧ, ಲಿಂಗಾಯತ, ಇಸ್ಲಾಂ, ಕ್ರೈಸ್ತ ಮುಂತಾದ ಧರ್ಮಗಳಿಗೆ ಆಶ್ರಯ ನೀಡಿ 'ಸರ್ವಧರ್ಮಧೇನು ನಿವಹಕ್ಕಾಡುಂಬೊಲಂ' ಎಂಬ ಕವಿವಾಣಿಗೆ ಅನ್ವರ್ಥಕವಾದುದು ಈ ಕನ್ನಡನಾಡು.



ಒಂದೊಮ್ಮೆ ಕಾವೇರಿಯಿಂದ ಗೋದಾವರಿಯ ತೀರದವರೆಗೆ ಹಬ್ಬಿದ ನಮ್ಮ ವಿಶಾಲವಾದ ಕನ್ನಡ ನಾಡು ವಸಾಹತುಶಾಹಿಯ ಆಡಳಿತದ ಪರಿಣಾಮವಾಗಿ ಹರಿದು ಹಂಚಿಹೋಗಿತ್ತು. ಕನ್ನಡತ್ವ ಮತ್ತು ಕರ್ನಾಟಕತ್ವದ ಪ್ರಜ್ಞೆ ಮಾಯವಾಗಿದ್ದ ಆ ಸಂದರ್ಭದಲ್ಲಿ ಡೆಪ್ಯೂಟಿ ಚೆನ್ನಬಸಪ್ಪ, ಆಲೂರ ವೆಂಕಟರಾಯರಂಥ ಅನೇಕ ಪುಣ್ಯಜೀವಿಗಳು ಆ ಪ್ರಜ್ಞೆಯನ್ನು ಮರುಸ್ಥಾಪಿಸಿ ಕನ್ನಡದ ಸಾಂಸ್ಕೃತಿಕ ನೆಲೆಯನ್ನು ಗಟ್ಟಿಗೊಳಿಸಿದರು. ಭಾರತದ ಸ್ವಾತಂತ್ರ್ಯ, ಕರ್ನಾಕದ ಏಕೀಕರಣ ಇವೆರಡೂ ಏಕಕಾಲದಲ್ಲಿ ನಡೆದು ಸ್ವತಂತ್ರ ಭಾರತದಲ್ಲಿ 1956ರ ನವೆಂಬರ 1ರಂದು ನಮ್ಮ ಚೆಲುವ ಕನ್ನಡ ನಾಡು ಉದಿಸಿ ಕನ್ನಡಿಗರೆಲ್ಲ ಸಂಭ್ರಮಪಡುವಂತಾದದ್ದು ಇಂದು ಇತಿಹಾಸ.

ಕನ್ನಡ ನಾಡು ಚೆನ್ನ, ಕನ್ನಡ ನುಡಿ ಚೆನ್ನ. ಚೆಲ್ವಾದುದು ಕನ್ನಡಮೆನಿಪ್ಪಾ ನಮ್ಮ ನಾಡು, ಚೆಲ್ವಾದುದು ಕನ್ನಡಮೆನಿಪ್ಪಾ ನಮ್ಮ ನುಡಿ. ಚೆಲುವ ಕನ್ನಡವನ್ನು ಆ ತಾಯಿಯ ಮಕ್ಕಳಾದ ನಾವೇ ಉಳಿಸಬೇಕು, ಬೆಳೆಸಬೇಕು.




ನಮ್ಮ ತಾಯಿ ನಮ್ಮ ನಿರ್ಲಕ್ಷ್ಯದಿಂದ ಕೊರಗಿ ಸಾಯುವಂತಾಗಬಾರದು. ಕನ್ನಡ ತಾಯಿ ಕರ್ನಾಟಕದಲ್ಲಿ ಕಳೆದು ಹೋಗದಂತೆ, ಕರ್ನಾಟಕ ಕರಗಿ ಹೋಗದಂತೆ ನೆಲ-ಜಲ, ಭಾಷೆ-ಸಂಸ್ಕೃತಿಗಳ ಉಳುವಿಗಾಗಿ ನಾವು ಶ್ರಮಿಸಬೇಕು. ಕನ್ನಡ ತಾಯಿ ಬದುಕಿದರೆ ಕರ್ನಾಟಕದಲ್ಲಿಯೇ ಬದುಕಬೇಕು, ಬೆಳೆದರೆ ಕರ್ನಾಟಕದಲ್ಲಿಯೇ ಬೆಳೆಯಬೇಕು. ಅಂತಹ ಕನ್ನಡ ಪ್ರಜ್ಞೆ ಹಾಗು ಕರ್ನಾಟಕ ಪ್ರಜ್ಞೆಯನ್ನು ನಾವೆಲ್ಲ ಮೈಗೂಡಿಸಿಕೊಂಡು, ಬೆಳೆಯೋಣ, ಕನ್ನಡ ನಾಡು-ನುಡಿಯನ್ನು ಬೆಳೆಸೋಣ.

# ಕನ್ನಡ ಭಾಷೆ

ಕರುನಾಡು ಸ್ವರ್ಗದ ಸೀಮೆ-ಕಾವೇರಿ ಹುಟ್ಟಿದ ನಾಡು. ಕಲ್ಲಲ್ಲಿ ಕಲೆಯನು ಕಂಡ-ಬೇಲೂರ ಶಿಲ್ಪದ ಬೀಡು. ಕಲಿಯೋಕೆ ಕೋಟಿ ಭಾಷೆ, ಆಡೋಕೆ ಒಂದೇ ಭಾಷೆ ಕನ್ನಡ. ವಿಶ್ವಖ್ಯಾತಿಯ ವಿಶ್ವೇಶ್ವರಯ್ಯ ಜನಿಸಿದ ಈ ನಾಡು. ಇದೆ ನಾಡು- ಇದೆ ಭಾಷೆ ಎಂದೆಂದೂ ನನ್ನದಾಗಿರಲಿ ಎಂಬ ಎಸ್.ಪಿ.ಬಿ ಅವರ ಗಾಯನದಂತೆ ಎಲ್ಲೇ ಇರಲಿ ಹೇಗೆ ಇರಲಿ ನಮ್ಮ ಉಸಿರಲ್ಲಿ ಕನ್ನಡ ಸದಾ ಅಚ್ಚ ಹಸಿರಾಗಿರಲಿ ಎಂಬುದು ನಮ್ಮ ಆಶಯ. ನಾವು ನಮ್ಮ ಕನ್ನಡದ ಸುಗ್ಗಿಯನ್ನು ಕೇವಲ ನವೆಂಬರ್ ಮಾಸದಲ್ಲಿ ಮಾತ್ರವಲ್ಲ ಪ್ರತಿ ದಿನ ಆಚರಿಸಬೇಕು.

ಸರ್ವ ಜನಾಂಗದ ಶಾಂತಿಯ ತೋಟ ನಮ್ಮ ನಾಡು. ಎಲ್ಲಾದರೂ ಇರು ಎಂತಾದರೂ ಇರು ಎಂದೆಂದಿಗೂ ನೀ ಕನ್ನಡವಾಗಿರು ಎಂಬಂತೆ ನಾವು ದೇಶದ ಯಾವುದೇ ಮೂಲೆಯಲ್ಲಿದ್ದರು ಕನ್ನಡವನ್ನು ಉಳಿಸಿ, ಬೆಳೆಸುವ ಸಂಸ್ಕೃತಿ ಪ್ರತಿಯೊಬ್ಬನ ಕನ್ನಡಿಗನದಾಗಲಿ. ಕನ್ನಡ ಭಾಷೆ ಮತ್ತು ಸಂಸ್ಕೃತಿಗೆ ಭಾರತದ್ದಲ್ಲೇ ಉಜ್ವಲವಾದ ಸ್ಥಾನವಿದೆ. ಕರ್ನಾಟಕದ ಹೆಸರು ವ್ಯಾಸ ಭಾರತದಲ್ಲೇ ಉಲ್ಲೇಖವಾಗಿದೆ. ಕನ್ನಡ ಭಾಷೆಗೆ ಎರಡು ಸಾವಿರ ವರ್ಷಕ್ಕೂ ಮಿಗಿಲಾದ ಇತಿಹಾಸವಿದೆ.




ಬೇಲೂರು, ಹಳೇಬೀಡು, ಬಾದಾಮಿ, ಐಹೊಳೆ, ಪಟ್ಟದ ಕಲ್ಲು ಮುಂತಾದ ಕಡೆಗಳಲ್ಲಿ ಶಿಲ್ಪ ಕಲೆಯು ಕಾವ್ಯವಾಗಿ ಮೈದಳೆದಿದೆ. ಪಂಪ, ರನ್ನ, ಜನ್ನರ ಕಾವ್ಯದ ಸೊಗಸು ಕಾಲವನ್ನೂ ಮೆಟ್ಟಿ ತಮ್ಮ ಚಿರಂತನತೆಯನ್ನು ಮೆರೆಯುತ್ತಿದೆ. ಕನ್ನಡ ಎಂದರೆ ಕೇವಲ ವರ್ಣಮಾಲೆಯಲ್ಲ, ಅದು ಕರುನಾಡ ನೆಲ, ಜಲ, ಜನ, ಬದುಕು, ಸಾಹಿತ್ಯ, ಸಂಸ್ಕೃತಿ, ಕಲೆ, ಸಂಗೀತ ಎಲ್ಲವನ್ನೂ ಒಳಗೊಂಡಿದೆ. ಕರುನಾಡು ಸ್ವರ್ಗದ ಸೀಮೆ-ಕಾವೇರಿ ಹುಟ್ಟಿನ ನಾಡು. ಕಲ್ಲಲ್ಲಿ ಕಲೆಯನು ಕಂಡ-ಬೇಲೂರ ಶಿಲ್ಪದ ಬೀಡು. ಬಸವೇಶ್ವರ, ರನ್ನ- ಪಂಪರ ಕವಿವಾಣಿಯ ನಾಡು ನಮ್ಮ ಕನ್ನಡ ನಾಡು.

ಈ ಪ್ರದೇಶವನ್ನು ಮೊದಲಿಗೆ ‘ಕರಿಯ ಮಣ್ಣಿನ ನಾಡು’ ಎಂದೂ, ‘ಕರುನಾಡು‘ ಎಂದರೆ ಎತ್ತರದ ಪ್ರದೇಶದಲ್ಲಿರುವ ನಾಡು ಎಂದೂ, ‘ಕಮ್ಮಿತ್ತು ನಾಡು’ ಎಂದರೆ ಶ್ರೀಗಂಧದ ಕಂಪನ್ನುಳ್ಳ ನಾಡು ಎಂದೂ ಕರೆಯುತ್ತಿದ್ದರು.

# ಕನ್ನಡ ಸಂಸ್ಕೃತಿ

ನಮ್ಮ ನೆರೆಯ ಸಂಸ್ಕೃತಿಗಳಿಗೆ ಹೋಲಿಸಿದರೆ ನಾವು ಅನೇಕ ಸಾಂಸ್ಕೃತಿಕ ಹೋಲಿಕೆಗಳನ್ನು ನೋಡುತ್ತೇವೆ ಮತ್ತು ಭಾಷೆ ಸಂಸ್ಕೃತಿಯ ವಿಶಿಷ್ಟ ಗುರುತಾಗುತ್ತದೆ. ಅದೇ ಸಮಯದಲ್ಲಿ, ಕರ್ನಾಟಕ ಮತ್ತು ಕನ್ನಡ ಭಾಷೆಯ ಪ್ರದೇಶಗಳ ಒಂದೇ ವ್ಯಾಪ್ತಿಯಲ್ಲಿ, ನಾವು ವೈವಿಧ್ಯಮಯ ಸಾಂಸ್ಕೃತಿಕ ಆಚರಣೆಗಳು ಮತ್ತು ಬಳಕೆಗಳನ್ನು ನೋಡುತ್ತೇವೆ. ಆದ್ದರಿಂದ ಇಡೀ ಸಂಸ್ಕೃತಿಯ ಪ್ರಧಾನ ಲಕ್ಷಣವಾಗಿ ಭಾಷೆಯನ್ನು ಮಾತ್ರ ಪರಿಗಣಿಸುವ ಮಿತಿಗಳ ಬಗ್ಗೆ ನಾವು ಜಾಗರೂಕರಾಗಿರಬೇಕು. ಸಂಸ್ಕೃತಿಯು ತನ್ನ ಅಭಿವ್ಯಕ್ತಿಗೆ ಕೇವಲ ಭಾಷೆಯ ಮೇಲೆ ಅವಲಂಬಿತವಾಗಿಲ್ಲ.

ಭಾರತವು ಶ್ರೀಮಂತ ಸಂಸ್ಕೃತಿಯನ್ನು ಹೊಂದಿದೆ ಮತ್ತು ಅದು ನಮ್ಮ ಗುರುತಾಗಿದೆ. ಧರ್ಮ, ಕಲೆ, ಬೌದ್ಧಿಕ ಸಾಧನೆಗಳು ಅಥವಾ ಪ್ರದರ್ಶನ ಕಲೆಗಳಲ್ಲಿ ಅದು ನಮ್ಮನ್ನು ವರ್ಣರಂಜಿತ, ಶ್ರೀಮಂತ ಮತ್ತು ವೈವಿಧ್ಯಮಯ ರಾಷ್ಟ್ರವನ್ನಾಗಿ ಮಾಡಿದೆ. ಭಾರತೀಯ ಸಂಸ್ಕೃತಿ ಮಾರ್ಗದರ್ಶನವಾಗಿದೆ.



ಭಾರತವು ಅನೇಕ ಸಂಸ್ಕೃತಿಗಳನ್ನು ಹೀರಿಕೊಂಡು ಮುನ್ನಡೆದಿರುವುದರಿಂದ ಪ್ರಬಲ ಮತ್ತು ಬಹು-ಸಂಸ್ಕೃತಿಯ ಸಮಾಜವಾಗಿ ನಿಂತಿದೆ. ಇಲ್ಲಿನ ಜನರು ವಿವಿಧ ಧರ್ಮ , ಸಂಪ್ರದಾಯ ಮತ್ತು ಪದ್ಧತಿಗಳನ್ನು ಅನುಸರಿಸಿದ್ದಾರೆ.

ಭಾರತದಲ್ಲಿನ ಸಂಸ್ಕೃತಿಯು ಜನರ ಜೀವನ, ಆಚರಣೆಗಳು, ಮೌಲ್ಯಗಳು, ನಂಬಿಕೆಗಳು, ಅಭ್ಯಾಸಗಳು, ಕಾಳಜಿ, ಜ್ಞಾನ, ಇತ್ಯಾದಿಗಳಿಂದ ಎಲ್ಲವೂ ಆಗಿದೆ. ಅಲ್ಲದೆ, ಭಾರತವನ್ನು ಅತ್ಯಂತ ಹಳೆಯ ನಾಗರಿಕತೆ ಎಂದು ಪರಿಗಣಿಸಲಾಗಿದೆ. ಅಲ್ಲಿ ಜನರು ತಮ್ಮ ಹಳೆಯ ಕಾಳಜಿ ಮತ್ತು ಮಾನವೀಯತೆಯನ್ನು ಇನ್ನೂ ಅನುಸರಿಸುತ್ತಾರೆ .ಅನೇಕ ವಿಭಿನ್ನ ಯುಗಗಳು ಬಂದು ಹೋಗಿವೆ ಆದರೆ ನಿಜವಾದ ಸಂಸ್ಕೃತಿಯ ಪ್ರಭಾವವನ್ನು ಬದಲಾಯಿಸಲು ಯಾವುದೇ ಯುಗವು ತುಂಬಾ ಶಕ್ತಿಯುತವಾಗಿಲ್ಲ.

ಕನ್ನಡ ಸಂಸ್ಕೃತಿಯಲ್ಲಿ ಜಾನಪದ ನೃತ್ಯ, ಹಾಡು, ನಾಟಕ, ಕಲೆ, ವೇಷಭೂಷಣಗಳು ಆಚರಣೆಗಳು, ಆಡಂಬರಗಳು ಕನ್ನಡದ ಸಂಸ್ಕೃತಿಯನ್ನು ಹೆಚ್ಚಿಸುತ್ತದೆ.

# ಕನ್ನಡ ಸಾಹಿತ್ಯ


ಭಾರತದ ಕರ್ನಾಟಕ ರಾಜ್ಯದಲ್ಲಿ ಉಪಯೋಗಿಸಲ್ಪಡುವ ಕನ್ನಡ ಭಾಷೆಯ ಸಾಹಿತ್ಯ. ಕನ್ನಡ ಭಾಷೆ ದ್ರಾವಿಡ ಭಾಷಾ ಬಳಗಕ್ಕೆ ಸೇರುತ್ತದೆ. ಆಧುನಿಕ ಭಾರತದಲ್ಲಿ ಪ್ರಚಲಿತವಾಗಿರುವ ಭಾಷೆಗಳಲ್ಲಿ ಎರಡನೇ ಅತಿ ಹಳೆಯ ಭಾಷೆಯೂ ಹೌದು (ತಮಿಳಿನ ನಂತರ). ಕನ್ನಡ ಸಾಹಿತ್ಯ ಭಾರತದಲ್ಲಿ ಮೂರನೇ ಅತಿ ಹಳೆಯ ಸಾಹಿತ್ಯಕ ಸಂಪ್ರದಾಯ, ಸಂಸ್ಕೃತ ಸಾಹಿತ್ಯ (ಮತ್ತು ಅದರ ಉಪಭಾಷೆಗಳಾದ ಪ್ರಾಕೃತ ಇತ್ಯಾದಿ) ಹಾಗೂ ತಮಿಳು ಸಾಹಿತ್ಯದ ನಂತರ.

ಕನ್ನಡ ಬರವಣಿಗೆಯ ಪ್ರಪ್ರಥಮ ಉದಾಹರಣೆ ದೊರಕಿರುವುದು **ಹಲ್ಮಿಡಿ ಶಾಸನ** ದಲ್ಲಿ (ಸು. ಕ್ರಿ.ಶ. ೪೫೦). ಪ್ರಸಿದ್ಧವಾದ ಬಾದಾಮಿ ಶಾಸನಗಳು ಪುರಾತನ ಕನ್ನಡ ಬರವಣಿಗೆಯ ಮತ್ತಷ್ಟು ಉದಾಹರಣೆಗಳನ್ನು ನೀಡುತ್ತವೆ. ಉಪಲಬ್ಧವಾಗಿರುವ ಪ್ರಥಮ ಕನ್ನಡ ಪುಸ್ತಕವೆಂದರೆ ೯ ನೇ ಶತಮಾನದ ಅಮೋಘವರ್ಷ ನೃಪತುಂಗನ ಕವಿರಾಜಮಾರ್ಗ. ಈ ಪುಸ್ತಕ ಕನ್ನಡ ಕಾವ್ಯ, ಕನ್ನಡ ನಾಡು, ಮತ್ತು ಕನ್ನಡಿಗರ ಬಗ್ಗೆ ಬರೆಯಲ್ಪಟ್ಟ ಒಟ್ಟಾರೆ ಸಾರಾಂಶವೆನ್ನಬಹುದು. ಇದಕ್ಕೆ ಹಿಂದೆ ಬರೆಯಲ್ಪಟ್ಟ ಕೆಲವು ಕನ್ನಡ ಪುಸ್ತಕಗಳ ಉಲ್ಲೇಖ ಈ ಪುಸ್ತಕದಲ್ಲಿ ಬಂದಿರುವ ಆಧಾರದ ಮೇಲೆ ಕನ್ನಡ ಸಾಹಿತ್ಯದ ಉಗಮ ಸುಮಾರು ಕ್ರಿ.ಶ. ೬-೭ನೇ ಶತಮಾನಗಳಲ್ಲಿ ಆದದ್ದಿರಬಹುದು. ಕನ್ನಡ ಸಾಹಿತ್ಯದ ಚರಿತ್ರೆಯನ್ನು ಮೂರು ಘಟ್ಟಗಳಾಗಿ ವಿಂಗಡಿಸಬಹುದು: **ಹಳೆಗನ್ನಡ, ನಡುಗನ್ನಡ ಹಾಗೂ ಆಧುನಿಕ ಕನ್ನಡ.**




## ಹಳೆಗನ್ನಡ


ಕನ್ನಡ ಸಾಹಿತ್ಯ ಚರಿತ್ರೆಯಲ್ಲಿ ಹತ್ತನೇ ಶತಮಾನದಿಂದ ಸುಮಾರು ಹನ್ನೆರಡನೇ ಶತಮಾನದ ವರೆಗಿನ ಕಾಲಘಟ್ಟವನ್ನು **ಹಳೆಗನ್ನಡ** ಎಂದು ಗುರುತಿಸಬಹುದು. ಈ ಕಾಲದ ಸಾಹಿತ್ಯ ಮುಖ್ಯವಾಗಿ ಜೈನ ಧರ್ಮವನ್ನು ಅವಲಂಬಿಸಿದೆ. ಕನ್ನಡ ಚರಿತ್ರೆಯ ಈ ಘಟ್ಟಕ್ಕೆ **ಆದಿ-ಕಾವ್ಯ** ಎಂದೂ ಸಹ ಕರೆಯಬಹುದು. ಈ ಕಾಲದ ಅತಿ ಪ್ರಸಿದ್ಧ ಕವಿಯೆಂದರೆ **ಪಂಪ** (ಕ್ರಿ.ಶ. ೯೦೨-೯೭೫). ಪಂಪನ ವಿಕ್ರಮಾರ್ಜುನ ವಿಜಯ ಅಥವಾ **ಪಂಪ ಭಾರತ** ಇಂದಿಗೂ ಮೇರು ಕೃತಿಯೆಂದು ಪರಿಗಣಿತವಾಗಿದೆ. ಪಂಪ ಭಾರತ ಮತ್ತು ತನ್ನ ಇನ್ನೊಂದು ಮುಖ್ಯಕೃತಿಯಾದ **ಆದಿಪುರಾಣ**ದ ಮೂಲಕ ಪಂಪ ಕನ್ನಡ ಕಾವ್ಯಪರಂಪರೆಯ ದಿಗ್ಗಜರಲ್ಲಿ ಒಬ್ಬನಾಗಿದ್ದಾನೆ.




# ನಡುಗನ್ನಡ

ನಡುಗನ್ನಡ ಸಾಹಿತ್ಯದಲ್ಲಿ ಅನೇಕ ಹೊಸ ಸಾಹಿತ್ಯ ಪ್ರಕಾರಗಳು ಬೆಳಕಿಗೆ ಬಂದವು. ಇವುಗಳಲ್ಲಿ ಮುಖ್ಯವಾದವು ರಗಳೆ, ಸಾಂಗತ್ಯ ಮತ್ತು ದೇಸಿ. ಈ ಕಾಲದ ಸಾಹಿತ್ಯ ಜೈನ, ಹಿಂದೂ ಹಾಗೂ ಜಾತ್ಯತೀತ ಬೋಧನೆಗಳ ಮೇಲೆ ಆಧಾರಿತವಾಗಿದೆ.

ಈ ಘಟ್ಟದ ಪ್ರಮುಖ ಲೇಖಕರಲ್ಲಿ ಇಬ್ಬರೆಂದರೆ ಹರಿಹರ ಮತ್ತು ರಾಘವಾಂಕ. ಇಬ್ಬರೂ ತಮ್ಮದೇ ಶೈಲಿಯಲ್ಲಿ ಕನ್ನಡ ಸಾಹಿತ್ಯದ ದಾರಿಯನ್ನು ಬೆಳಗಿದವರು. ಹರಿಹರ ರಗಳೆ ಸಾಹಿತ್ಯವನ್ನು ಬಳಕೆಗೆ ತಂದನು, ತನ್ನ ಶೈವ ಮತ್ತು ವೀರಶೈವ ಕೃತಿಗಳ ಮೂಲಕ. ರಾಘವಾಂಕ ತನ್ನ ಆರು ಕೃತಿಗಳ ಮೂಲಕ ಷಟ್‌ಪದಿ ಛಂದಸ್ಸನ್ನು ಜನಪ್ರಿಯಗೊಳಿಸಿದನು. ಅವನ ಮುಖ್ಯ ಕೃತಿ ಹರಿಶ್ಚಂದ್ರ ಕಾವ್ಯ, ಪೌರಾಣಿಕ ಪಾತ್ರವಾದ ಹರಿಶ್ಚಂದ್ರನ ಜೀವನವನ್ನು ಕುರಿತದ್ದು. ಈ ಕೃತಿ ಸಹ ತನ್ನ ತೀವ್ರವಾದ ಮಾನವತಾವಾದಕ್ಕೆ ಪ್ರಸಿದ್ಧವಾಗಿದೆ.





## ಆಧುನಿಕ ಕನ್ನಡ

### ಕನ್ನಡದ ನವೋದಯ

ನವೋದಯ ಎಂದರೆ ಹೊಸ ಹುಟ್ಟು. ಬ್ರಿಟಿಷ್ ಆಳ್ವಿಕೆಯ ಪ್ರಾರಂಭಿಕ ಹಂತಗಳಲ್ಲಿ ಹೆಚ್ಚು ಬೆಳಕು ಕಾಣದೆ ಇದ್ದ ಕನ್ನಡ ಸಾಹಿತ್ಯ, ೧೯ನೇ ಶತಮಾನದ ಕೊನೆಗೆ ಹಾಗು ಇಪ್ಪತ್ತನೆ ಶತಮಾನದ ಆರಂಭದಲ್ಲಿ ಹೊಸ ಹುಟ್ಟು ಪಡೆಯಿತು .ಆಧುನಿಕ ಕನ್ನಡ ಕಾವ್ಯದ ಬೆಳವಣಿಗೆ ಗೆ ಕಾರಣವಾಯಿತು. ಈ ಹಂತದಲ್ಲಿ ಬಿ.ಎಂ.ಶ್ರೀ, ಕುವೆಂಪು , ಬೇಂದ್ರೆ, ಶಿವರಾಮ ಕಾರಂತ ಮೊದಲಾದ ಶ್ರೇಷ್ಠ ಲೇಖಕರು ಬೆಳಕಿಗೆ ಬಂದರು. ಈ ಕಾಲದ ಸಾಹಿತ್ಯ ಪ್ರಕಾರಗಳು ರೊಮ್ಯಾಂಟಿಕ್ ಇಂಗ್ಲಿಷ್ ಕಾವ್ಯ ಮತ್ತು ಗ್ರೀಕ್ ರುದ್ರನಾಟಕಗಳಿಂದ ಪ್ರಭಾವಿತವಾಯಿತು. ಈ ಘಟ್ಟದ ಬೆಳವಣಿಗೆಯನ್ನು ತಂದವರು ಬಿ.ಎಂ.ಶ್ರೀಕಂಠಯ್ಯ, ತಮ್ಮ ಇಂಗ್ಲಿಷ್ ಗೀತಗಳು ಪುಸ್ತಕದೊಂದಿಗೆ. ಅನೇಕ ಸುಶಿಕ್ಷಿತ ಕನ್ನಡಿಗರು, ಮುಖ್ಯವಾಗಿ ಶಿಕ್ಷಕ ವೃತ್ತಿಯಲ್ಲಿದ್ದವರು, ತಮ್ಮ ಮಾತೃಭಾಷೆಯಲ್ಲಿ ಬರೆಯುವುದರ ಮಹತ್ವವನ್ನು ಕಂಡುಕೊಂಡು ಕನ್ನಡ ಸಾಹಿತ್ಯಕ್ಕೆ ಪ್ರೇರಣೆಯನ್ನೊದಗಿಸಿದರು.

# ಕವಿಗಳು




- ಕೆ.ವಿ ಪುಟ್ಟಪ್ಪ
- ದ.ರಾ. ಬೇಂದ್ರೆ
- ಬಿ.ಎಂ. ಶ್ರೀಕಂಠಯ್ಯ
- ಮಾಸ್ತಿ
- ವಿ.ಕೃ. ಗೋಕಾಕ
- ವಿ.ಸೀತಾರಾಮಯ್ಯ
- ರಂ.ಶ್ರೀ. ಮುಗಳಿ
- ಅನಸೂಯಶಂಕರ
- ಆದ್ಯರಂಗಾಚಾರ್ಯ
- ಸುಬ್ರಮಣ್ಯರಾಜೇ ಅರಸ್
- ರಾಘವೇಂದ್ರ ಸ್ವಾಮೀಜಿ
- ವೆಂಕಟಾದ್ರಿ ಐಯ್ಯರ್
- ಡಿ.ವಿ. ಗುಂಡಪ್ಪ
- ಪು.ತಿ.ನ
- ಅರಗ ಲಕ್ಷ್ಮಣರಾವ್
- ನಾಕಸ್ತೂರಿ

# ಸಾಧಕರು




- ಕೆಂಗಲ್ ಹನುಮಂತಯ್ಯ (ಏಕೀಕರಣದ ಹೋರಾಟಗಾರ, ವಿಧಾನಸೌಧ ನಿರ್ಮಾಣ ಮಾಡಿದವರು
- ಕಯ್ಯಾರ ಕಿಞ್ಞಣ್ಣ ರೈ (ಕವಿ, ಸಾಹಿತಿ)
- ಕಮಲಾದೇವಿ (ಸ್ವಾತಂತ್ರ್ಯ ಹೋರಾಟಗಾರ್ತಿ)
- ಕಲ್ಪನಾ (ನಟಿ)
- ಗಂಗೂಬಾಯಿ ಹಾನಗಲ್ (ಗಾಯಕಿ)
- ಡಾ. ರಾಜ್ ಕುಮಾರ್ (ನಟ)
- ಪುಟ್ಟಣ್ಣ ಕಣಗಾಲ್ (ನಿರ್ದೇಶಕ)
- ಅನಿಲ್ ಕುಂಬ್ಳೆ (ಕ್ರಿಕೆಟಿಗ)
- ಜಿ.ವೆಂಕಟಸುಬ್ಬಯ್ಯ (ನಿಘಂಟು ತಜ್ಞ)
- ಯು. ಆರ್. ರಾವ್ (ಬಾಹ್ಯಾಕಾಶ ವಿಜ್ಞಾನಿ
- ನಾರಾಯಣ ಮೂರ್ತಿ (ಮಾಹಿತಿ ತಂತ್ರಜ್ಞಾನ)

# ಧನ್ಯವಾದಗಳು